ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ:https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿ025521**

**ಕಂಪನಿ ಅಧಿಕೃತ ಕಛೇರಿ:** ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009.

**ಸಂಖ್ಯೆ:ಕವಿಪ್ರನಿನಿ/ಜಿ5/9655/2020-21** ದಿನಾಂಕ: 08 DEC 2020

## ಸುತ್ತೋಲೆ

**ವಿಷಯ:** ಸಿಬ್ಬಂದಿಯು ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವ ಮತ್ತು ಸಿಬ್ಬಂದಿಯು ಕರ್ತವ್ಯ ನಿರ್ವಹಿಸುವ ಮೇಜಿನ ಮೇಲೆ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸುವ ಬಗ್ಗೆ.

**ಉಲ್ಲೇಖ:** ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಕತವ 2020 ದಿನಾಂಕ; 03.11.2020.

-----

ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಕರ್ತವ್ಯದ ಅವಧಿಯಲ್ಲಿ ಸಿಬ್ಬಂದಿಯು ಕಡ್ಡಾಯವಾಗಿ ಇಲಾಖೆಯಿಂದ ಪಡೆದ ಗುರುತಿನ ಚೀಟಿಯನ್ನು ಧರಿಸುವ ಮತ್ತು ಸಿಬ್ಬಂದಿಯು ಕರ್ತವ್ಯ ನಿರ್ವಹಿಸುವ ಮೇಜಿನ ಮೇಲೆ ಅಧಿಕಾರಿ/ಸಿಬ್ಬಂದಿಯ ಹೆಸರು ಮತ್ತು ಹುದ್ದೆ ಸೂಚಿಸುವ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಿ ಸಾರ್ವಜನಿಕ ಸೇವೆಯಲ್ಲಿ ಪಾರದರ್ಶಕತೆಯನ್ನು ತರಲು ಕ್ರಮವನ್ನು ಕೈಗೊಳ್ಳಲು ಸೂಚಿಸಿದ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಕತವ 2020 ದಿನಾಂಕ; 03.11.2020 ನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಅಳವಡಿಸಿಕೊಂಡಿಸಿದ್ದು, ಸರ್ಕಾರದ ಆದೇಶದ ಪ್ರತಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿದೆ.

ಆದ್ದರಿಂದ, ಸರ್ಕಾರದ ದಿನಾಂಕ; 03.11.2020 ರ ಆದೇಶದಲ್ಲಿನ ಸೂಚನೆಗಳಂತೆ, ರಾಜ್ಯಾದ್ಯಂತ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಎಲ್ಲಾ ಕಛೇರಿಗಳ ಮುಖ್ಯಸ್ಥರುಗಳು ಕ್ರಮಗಳನ್ನು ಜರುಗಿಸಲು ಮತ್ತು ಅಧೀನದಲ್ಲಿನ ಸಿಬ್ಬಂದಿಗಳಿಗೆ ಆದೇಶವನ್ನು ತಪ್ಪದೇ ಪಾಲಿಸುವಂತೆ ಸೂಕ್ತ ಸೂಚನೆಗಳನ್ನು ನೀಡಲು ಸೂಚಿಸಿದೆ.

'ವ್ಯವಸ್ಥಾಪಕ ನಿರ್ದೇಶಕರಿಂದ
ಅನುಮೋದಿಸಲ್ಪಟ್ಟಿದೆ'

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ.**

**ಪ್ರತಿಗಳು:**

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಮುಖ್ಯ ಇಂಜಿನಿಯರ್(ವಿ)/ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
4. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ.) ರವರ ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

**ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in-->eprasarana ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.**

5. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ.
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.
7. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ.
8. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಗಳು ಮಾಹಿತಿಗಾಗಿ:**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ.ನಿ. / ಎಸ್ಕಾಂ ಪ.ಜಾ. /ಪ. ಪಂ. ಅಧಿಕಾರಿಗಳ ಸಂಘ, ಬೆಂಗಳೂರು.

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಅಧಿಕಾರಿ/ ಸಿಬ್ಬಂದಿಗಳು ಗುರುತಿನ ಚೀಟಿ ಧರಿಸುವ ಬಗ್ಗೆ ಮತ್ತು ನಾಮ ಫಲಕಗಳನ್ನು ಮೇಜಿನ ಮೇಲೆ ಇರಿಸುವ ಬಗ್ಗೆ.

***

**ಪ್ರಸ್ತಾವನೆ:-**

ರಾಜ್ಯ ಸರ್ಕಾರದ ಕಛೇರಿಗಳಿಗೆ ಸಾರ್ವಜನಿಕರು ಕೆಲಸ ಕಾರ್ಯಗಳಿಗೆ ದಿನ ನಿತ್ಯ ಭೇಟಿ ನೀಡುತ್ತಾರೆ. ಕಛೇರಿಗಳಿಗೆ ಭೇಟಿ ನೀಡಿದ ಸಂದರ್ಭಗಳಲ್ಲಿ ಸಾರ್ವಜನಿಕರು ಯಾವ ಅಧಿಕಾರಿಗಳನ್ನು ಭೇಟಿ ಮಾಡ ಬೇಕು ಎಂಬ ಮಾಹಿತಿ ಸಾರ್ವಜನಿಕರಿಗೆ ಸರ್ಕಾರಿ ಕಛೇರಿಗಳಲ್ಲಿ ಲಭ್ಯವಿರುವುದಿಲ್ಲ. ಆದ್ದರಿಂದ ಬ್ಯಾಂಕು ಮತ್ತು ಅಂಚೆ ಕಛೇರಿಗಳಲ್ಲಿ ನಮೂದಿಸಿರುವಂತೆ ರಾಜ್ಯ ಸರ್ಕಾರದ ಎಲ್ಲಾ ಕಛೇರಿಗಳಲ್ಲಿ ಹಾಗೂ ನಿಗಮ/ಮಂಡಳಿಗಳಲ್ಲಿ ಅಧಿಕಾರಿ/ಸಿಬ್ಬಂದಿಗಳ ಹೆಸರು ಮತ್ತು ಹುದ್ದೆಯ ನಾಮ ಫಲಕಗಳನ್ನು ಅಳವಡಿಸುವುದು ಹಾಗೂ ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಅಧಿಕಾರಿ/ಸಿಬ್ಬಂದಿಗಳು ಗುರುತಿನ ಚೀಟಿ ಧರಿಸುವುದು ಅವಶ್ಯಕವಾಗಿರುತ್ತದೆ. ಈ ರೀತಿ ಅಳವಡಿಸುವುದರಿಂದ ಸಾರ್ವಜನಿಕರು ತಮ್ಮ ಕಾರ್ಯಗಳಿಗೆ ಸಂಬಂಧಿಸಿದ ಅಧಿಕಾರಿ/ಸಿಬ್ಬಂದಿಗಳನ್ನು ನೇರವಾಗಿ ಭೇಟಿಯಾಗಿ ಮಾಹಿತಿ ಪಡೆಯಬಹುದಾಗಿದೆ. ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಕಕವ 2020**
**ಬೆಂಗಳೂರು, ದಿನಾಂಕ: 03.11.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಕರ್ತವ್ಯದ ಅವಧಿಯಲ್ಲಿ ಅಧಿಕಾರಿ/ ಸಿಬ್ಬಂದಿಗಳು ಕಡ್ಡಾಯವಾಗಿ ಇಲಾಖೆಯಿಂದ ಪಡೆದ ಗುರುತಿನ ಚೀಟಿಯನ್ನು ಕೊರಳಿಗೆ ಧರಿಸಿ ಪ್ರದರ್ಶಿಸತಕ್ಕದ್ದು. ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿ/ಅಧಿಕಾರಿಗಳು ತಾವು ಕುಳಿತು ಕರ್ತವ್ಯ ನಿರ್ವಹಿಸುವ ಮೇಜಿನ ಮೇಲೆ ಅಧಿಕಾರಿ/ ಸಿಬ್ಬಂದಿಗಳು ಹೆಸರು ಮತ್ತು ಹುದ್ದೆ ಸೂಚಿಸುವ ನಾಮ ಫಲಕಗಳನ್ನು ಕಡ್ಡಾಯವಾಗಿ ಅಳವಡಿಸಿ ಸಾರ್ವಜನಿಕ ಸೇವೆಯಲ್ಲಿ ಪಾರದರ್ಶಕತೆಯನ್ನು ತರಲು ಕ್ರಮ ಕೈಗೊಳ್ಳತಕ್ಕದ್ದು.

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು ತಮ್ಮ ಅಧೀನ ಇಲಾಖೆಗಳಿಗೆ ಹಾಗೂ ಸರ್ಕಾರದ ಅಧೀನದ ನಿಗಮ/ ಮಂಡಳಿಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಈ ಆದೇಶವನ್ನು ಪಾಲಿಸಲು ಸೂಕ್ತ ನಿರ್ದೇಶನ ನೀಡತಕ್ಕದ್ದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು**
**ಅವರ ಹೆಸರಿನಲ್ಲಿ**

**(ಹೆಚ್.ಸಿ. ಹರ್ಷರಾಣಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ-ತಪಾಸಣೆ).

**ಗೆ.**

1)ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2)ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3)ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4)ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು
5)ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ,ಬೆಂಗಳೂರು.
6) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಸಿಆಸುಇ (ಆಸು).
7)ಸರ್ಕಾರದ ಉಪ ಕಾರ್ಯದರ್ಶಿಗಳ ಆಪ್ತ ಸಹಾಯಕರು, ಸಿಆಸುಇ (ಆಸು).